ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

*Office of the Registrar, Central College Campus, Dr. B.R. Ambedkar Veedhi, Bengaluru – 560 001.*
*PhNo.080-22131385, E-mail: registrarbcu@gmail.com*

ಸಂಖ್ಯೆ.ಬಿಸಿಯು/ಕು.ಸ.ಅ/ಎನ್ಇಪಿ/18 4/2021-22 ದಿನಾಂಕ: 11.10.2021

## ಸುತ್ತೋಲೆ

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಐದು ವಿಧಾನ ಸಭಾ ಕ್ಷೇತ್ರಗಳ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರುಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ –2020 ಕುರಿತಂತೆ ಒಂದು ದಿವಸದ ಓರಿಯೆಂಟೇಶನ್ ಕಾರ್ಯಕ್ರಮವನ್ನು ಆಯೋಜಿಸಿರುವ ಕುರಿತು

****

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020 ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು ಅದರ ಭಾಗವಾಗಿ ವಿಶ್ವವಿದ್ಯಾನಿಲಯದ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಅಧ್ಯಾಪಕರುಗಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ 2020 ಕುರಿತಂತೆ ಅಗತ್ಯ ಮಾಹಿತಿ ನೀಡುವ ಓರಿಯೆಂಟೇಶನ್ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಇದರ ಮೊದಲ ಹಂತದ ಓರಿಯೆಂಟೇಶನ್ ಕಾರ್ಯಕ್ರಮವನ್ನು ಜಯನಗರ, ಬಸವನಗುಡಿ, ಗಾಂಧಿನಗರ, ಚಿಕ್ಕಪೇಟೆ ಮತ್ತು ಮಲೇಶ್ವರಂ, ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರುಗಳಿಗೆ **ದಿನಾಂಕ 13.10.2021 ರಂದು ಬೆಳಿಗ್ಗೆ 11.00 ಗಂಟೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜು ಆವರಣ, ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿಯವರು ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ಉಪನ್ಯಾಸ ನೀಡಲಿದ್ದಾರೆ. ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಶಿಕ್ಷಣ ನೀತಿ ಕಾರ್ಯಪಡೆಯ ಸದಸ್ಯರಾದ ಡಾ. ಟಿ. ಡಿ. ಕೆಂಪರಾಜು, ವಿಶ್ರಾಂತ ಕುಲಪತಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ ಇವರು ಓರಿಯೆಂಟೇಶನ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮೇಲೆ ನಮೂದಿಸಿದ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಅಧ್ಯಾಪಕರು ಕಡ್ಡಾಯವಾಗಿ ಓರಿಯೆಂಟೇಶನ್ ಕಾರ್ಯಕ್ರಮದಲ್ಲಿ ಭಾಗವಹಿಸಲು ಕೋರಲಾಗಿದೆ.

ಕುಲಸಚಿವರು

Registrar
Bengaluru City University
Central College Campus,
Bengaluru - 560001.

ಗೆ,

ಜಯನಗರ, ಬಸವನಗುಡಿ, ಗಾಂಧಿನಗರ, ಚಿಕ್ಕಪೇಟೆ ಮತ್ತು ಮಲೇಶ್ವರಂ, ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

ಪ್ರತಿ:

1. ಎಲ್ಲಾ ಡೀನರುಗಳು / ಮುಖ್ಯಸ್ಥರು/ ಅಧ್ಯಾಪಕರು, ಬೆಂ.ನ.ವಿ, ಬೆಂಗಳೂರು
2. ಕುಲಪತಿಗಳು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ)/ ವಿತ್ತಾಧಿಕಾರಿಗಳ ಆಪ್ತ ಕಾರ್ಯದರ್ಶಿಗಳು, ಬೆಂ.ನ.ವಿ, ಬೆಂಗಳೂರು
3. ಕಛೇರಿ ಪ್ರತಿ / ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸಲು